3. ಶಾಸನ ರಚನೆ

ವಿಧೇಯಕಗಳನ್ನು ಮಂಡಿಸುವುದು

ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ಮತ್ತು ಕೆಲವು ಇತರ ಕಾನೂನು(ತಿದ್ದುಪಡಿ) ವಿಧೇಯಕ, 2002 ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಮಲ್ಲಿಕಾರ್ಜುನ ಖರ್ಗೆ(ಗೃಹ ಸಚಿವರು): (ಸನ್ಮಾನ್ಯ ಮುಖ್ಯಮಂತ್ರಿಯವರ ಪರವಾಗಿ):- ಸನ್ಮಾನ್ಯ ಅಧ್ಯಕ್ಷರೇ, "2002ರ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ಮತ್ತು ಕೆಲವು ಇತರ ಕಾನೂನು (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ."

ಅಧ್ಯಕ್ಷರು:- ಪ್ರಸ್ತಾವ ಏನೆಂದರೆ, "2002ನೇ ಸಾಲಿನ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ಮತ್ತು ಕೆಲವು ಇತರ ಕಾನೂನು(ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು.

ಶ್ರೀ ಮಲ್ಲಿಕಾರ್ಜುನ ಖರ್ಗೆ(ಗೃಹ ಸಚಿವರು): (ಮಾನ್ಯ ಮುಖ್ಯಮಂತ್ರಿಯವರ ಪರವಾಗಿ):- ಮಾನ್ಯ ಅಧ್ಯಕ್ಷರೇ, "2002ನೇ ಸಾಲಿನ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ಮತ್ತು ಕೆಲವು ಇತರ ಕಾನೂನು(ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ."

ಅಧ್ಯಕ್ಷರು:- X ವಿಧೇಯಕವನ್ನು ಮಂಡಿಸಲಾಗಿದೆ X - 3

(2)

ಕರ್ನಾಟಕ ಸರ್ಕಾರಿ ಖಾತರಿಗಳ ಮೇಲಿನ ಮಿತಿ(ತಿದುಪಡಿ) ವಿಧೇಯಕ, 2002 ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಮಲ್ಲಿಕಾರ್ಜುನ ಖರ್ಗೆ(ಮಾನ್ಯ ಗೃಹಸಚಿವರು): (ಸನ್ಮಾನ್ಯ ಮುಖ್ಯಮಂತ್ರಿಯವರ ಪರವಾಗಿ):- ಮಾನ್ಯ ಅಧ್ಯಕ್ಷರೇ, "ಕರ್ನಾಟಕ ಸರ್ಕಾರಿ ಖಾತರಿಗಳ ಮೇಲಿನ ಮಿತಿ(ತಿದ್ದುಪಡಿ) ವಿಧೇಯಕ, 2002ನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ."

X - ಅನುಬಂಧ 3